ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿ/ಪರೀಕ್ಷೆ/ನೋ&ಫ/2018-19 ದಿನಾಂಕ: 21-05-2018.

**ಸು ತ್ತೋ ಲೆ**

**ವಿಷಯ:** 2018ರ ಜೂನ್ ತಿಂಗಳಿನಲ್ಲಿ ನಡೆಸುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪುನರಾವರ್ತಿತ (Repeater) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** 1. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಪಪೂಶಿ/ಪರೀಕ್ಷೆ/ನೋ&ಫ/ಮಾ-18/2017-18 ದಿನಾಂಕ: 14-05-2018.

2. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಪಪೂಶಿ/ಪರೀಕ್ಷೆ/ನೋ&ಫ/2018-19 ದಿನಾಂಕ: 17-05-2018.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಜೂನ್-2018ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳಿಗೆ ರಿಪೀಟರ್ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆ ಅನ್ವಯ ಈ ಕೆಳಗಿನಂತೆ ನಿಗದಿಪಡಿಸಲಾಗಿತ್ತು.

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಅಂತಿಮ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ತಲುಪಿಸುವ ದಿನಾಂಕ |
|---|---|---|
| 18-05-2018 | 19-05-2018 | 21-05-2018 |

ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ ಮೇರೆಗೆ ಜೂನ್-2018, ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಅರ್ಜಿ ಸಲ್ಲಿಸಲು/ ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕಡೇ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ:

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತರಿಸಲಾದ ಕಡೇ ದಿನಾಂಕ | ಕಾಲೇಜಿನವರು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿದ ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ತಲುಪಿಸುವ ದಿನಾಂಕ |
|---|---|---|
| 23-05-2018 | 24-05-2018 | 25-05-2018 |

ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತೃತ ದಿನಾಂಕಗಳಲ್ಲಿ ಯಾವುದೇ ದಂಡ ಶುಲ್ಕವಿರುವುದಿಲ್ಲ.

ಸದರಿ ಪರೀಕ್ಷೆಗಳಿಗೆ ರಿಪೀಟರ್ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಲ್ಲಿಸಲು ಇದೇ ಅಂತಿಮ ಅವಕಾಶವಾಗಿರುತ್ತದೆ ಆದಕಾರಣ ಮೇಲೆ ತಿಳಿಸಿರುವ ದಿನಾಂಕದ ನಂತರ ಕಾಲೇಜಿನ ಪ್ರಾಂಶುಪಾಲರು ಯಾವುದೇ ಪುನರಾವರ್ತಿತ ಅಭ್ಯರ್ಥಿಗಳ ಅರ್ಜಿಗಳನ್ನು ಸ್ವೀಕರಿಸಕೂಡದು.

ಜಿಲ್ಲಾ ಉಪನಿರ್ದೇಶಕರು ಒಂದೇ ಕಂತಿನಲ್ಲಿ ಎಲ್ಲಾ ಪುನರಾವರ್ತಿತ ಅಭ್ಯರ್ಥಿಗಳ ಅರ್ಜಿಗಳನ್ನು ಖುದ್ದಾಗಿ ಇಲಾಖೆಗೆ ದಿನಾಂಕ 26-05-2018ರಂದ ಕೇಂದ್ರ ಕಛೇರಿಗೆ ಸಲ್ಲಿಸುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಪರೀಕ್ಷಾ ಶಾಖೆಯ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ.
4. ಗಳಿಕ ಕಾಣಿಗೆ

Scanned by CamScanner